## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ :** ಕರ್ನಾಟಕ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆ ಅಡಿ 2017–18ನೇ ಸಾಲಿನ ಪ್ರಥಮ ಕಂತಿನ ಅನುದಾನ ಬಿಡುಗಡೆ ಮಾಡುವ ಬಗ್ಗೆ.

**ಓದಲಾಗಿದೆ :** (1) ಸರ್ಕಾರಿ ಆದೇಶ ಸಂಖ್ಯೆ:ಯೋಇ 70 ಯೋವಿವಿ 2017, ದಿನಾಂಕ:14.06.2017
(2) ಶ್ರೀ ಸಿ.ಎಂ.ಲಿಂಗಪ್ಪ, ಮಾನ್ಯ ವಿಧಾನ ಪರಿಷತ್ ಸದಸ್ಯರು, ಇವರ ಪತ್ರ ದಿನಾಂಕ:10.07.2017

**ಪ್ರಸ್ತಾವನೆ:**

ಮೇಲೆ (1)ರಲ್ಲಿ ಓದಲಾದ ಸರ್ಕಾರಿ ಆದೇಶದಲ್ಲಿ ಕರ್ನಾಟಕ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯಡಿ 225 ವಿಧಾನಸಭಾ ಕ್ಷೇತ್ರಗಳು ಮತ್ತು 71 ವಿಧಾನ ಪರಿಷತ್ ಸದಸ್ಯರುಗಳ ಕ್ಷೇತ್ರಗಳಿಗೆ 2017–18ನೇ ಸಾಲಿನ ಪ್ರಥಮ ಕಂತಿನ ಅನುದಾನ ತಲಾ ರೂ.50.1125 ಲಕ್ಷಗಳಂತೆ ಒಟ್ಟು ರೂ.14833.30 ಲಕ್ಷಗಳನ್ನು ಬಿಡುಗಡೆ ಮಾಡಲಾಗಿದೆ. ಪ್ರಸ್ತುತ, ಮೇಲೆ (2)ರಲ್ಲಿ ಓದಲಾದ ಪತ್ರದಲ್ಲಿ ಶ್ರೀ ಸಿ.ಎಂ.ಲಿಂಗಪ್ಪ, ಮಾನ್ಯ ವಿಧಾನ ಪರಿಷತ್ ಸದಸ್ಯರು (ನಾಮನಿರ್ದೇಶಿತರು), ಈ ಯೋಜನೆಯ ಅನುಷ್ಠಾನಕ್ಕಾಗಿ ರಾಮನಗರ ಜಿಲ್ಲೆಯನ್ನು ನೋಡಲ್ ಜಿಲ್ಲೆಯನ್ನಾಗಿ ಆಯ್ಕೆ ಮಾಡಿಕೊಂಡಿರುವುದರಿಂದ, ಶ್ರೀಯುತರ ವಿಧಾನ ಪರಿಷತ್ ಕ್ಷೇತ್ರಕ್ಕೆ 2017–18ನೇ ಸಾಲಿನ ಪ್ರಥಮ ಕಂತಿನ ಅನುದಾನವನ್ನು ಬಿಡುಗಡೆ ಮಾಡಲು ಸರ್ಕಾರವು ಉದ್ದೇಶಿಸಿದೆ. ಅದರಂತೆ ಈ ಆದೇಶ.

### ಸರ್ಕಾರಿ ಆದೇಶ ಸಂಖ್ಯೆ: ಯೋಇ 70 ಯೋವಿವಿ 2017, ಬೆಂಗಳೂರು, ದಿನಾಂಕ:13.07.2017

ಕರ್ನಾಟಕ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯಡಿ ಶ್ರೀ ಸಿ.ಎಂ.ಲಿಂಗಪ್ಪ, ಮಾನ್ಯ ವಿಧಾನ ಪರಿಷತ್ ಸದಸ್ಯರು ಇವರ ಕ್ಷೇತ್ರಕ್ಕೆ 2017–18ನೇ ಸಾಲಿನ ಪ್ರಥಮ ಕಂತಿನ ಅನುದಾನ ರೂ.50.1125 ಲಕ್ಷ (ಐವತ್ತು ಲಕ್ಷದ ಹನ್ನೊಂದು ಸಾವಿರದ ಎರಡು ನೂರ ಐವತ್ತು ರೂಪಾಯಿಗಳು ಮಾತ್ರ) ಗಳನ್ನು ಜಿಲ್ಲಾಧಿಕಾರಿ, ರಾಮನಗರ ಜಿಲ್ಲೆ ಇವರಿಗೆ ಈ ಕೆಳಕಂಡ ಲೆಕ್ಕಶೀರ್ಷಿಕೆಗಳಡಿ ಬಿಡುಗಡೆ ಮಾಡಿದೆ.

| ಕ್ರಮ ಸಂಖ್ಯೆ | ಲೆಕ್ಕಶೀರ್ಷಿಕೆ | ರೂ. ಲಕ್ಷಗಳಲ್ಲಿ |
|---|---|---|
| 1 | 2575–60–265–0–02–059 | 0.1125 |
| 2 | 4575–60–800–0–01–132 | 39.5250 |
| 3 | 4575–60–800–0–01–422 | 9.4150 |
| 4 | 4575–60–800–0–01–423 | 1.0600 |
| | ಒಟ್ಟು | **50.1125** |

2. ಬಿಡುಗಡೆಯಾದ ಈ ಅನುದಾನವನ್ನು ಜಿಲ್ಲಾಧಿಕಾರಿಗಳ ವೈಯಕ್ತಿಕ ಠೇವಣಿ ಖಾತೆಯಲ್ಲಿಟ್ಟುಕೊಂಡು ಅಗತ್ಯತೆಗೆ ಅನುಗುಣವಾಗಿ ಖರ್ಚು ಮಾಡತಕ್ಕದ್ದು.

3. ಜಿಲ್ಲಾಧಿಕಾರಿಗಳು ಶಾಸಕರಿಂದ ಕ್ರಿಯಾ ಯೋಜನೆಯನ್ನು ಪಡೆದು ಅಧಿಕೃತ ಜ್ಞಾಪನ ಸಂಖ್ಯೆ:ಯೋಇ 77 ಯೋವಿವಿ 2013. ದಿನಾಂಕ:17.05.2014 ರಲ್ಲಿ ಹೊರಡಿಸಲಾದ ಮತ್ತು ತದನಂತರ ಪರಿಷ್ಕರಿಸಲಾದ ಮಾರ್ಗಸೂಚಿಗಳನ್ವಯ ಅನುಷ್ಠಾನಗೊಳಿಸತಕ್ಕದ್ದು.

……………….2

4. ನಿಯಮಾನುಸಾರ ಹಣ ಬಳಕೆ ಪ್ರಮಾಣ ಪತ್ರವನ್ನು ಜಿಲ್ಲಾಧಿಕಾರಿಗಳ ಮೇಲು ಸಹಿಯೊಂದಿಗೆ ಸರ್ಕಾರಕ್ಕೆ ಸಲ್ಲಿಸುವುದು. ಬಿಡುಗಡೆ ಮಾಡಿದ ಅನುದಾನವನ್ನು ನಿಗದಿತ ಅವಧಿಯಲ್ಲಿ ಬಳಕೆ ಮಾಡಿಕೊಳ್ಳತಕ್ಕದ್ದು.

5. ಈ ಆದೇಶವನ್ನು ಆರ್ಥಿಕ ಇಲಾಖೆಯ ಹಿಂಬರಹ ಸಂಖ್ಯೆ:ಎಫ್‌ಡಿ 350 ವೆಚ್ಚ-6/2017, ದಿನಾಂಕ 02.06.2017 ರಲ್ಲಿನ ಸಹಮತಿಯನುಸಾರ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಲಲಿತ)
ಸರ್ಕಾರದ ಅಧೀನ ಕಾರ್ಯದರ್ಶಿ-3,
ಯೋಜನೆ, ಕಾರ್ಯಕ್ರಮ ಸಂಯೋಜನೆ
ಮತ್ತು ಸಾಂಖ್ಯಿಕ ಇಲಾಖೆ

ಇವರಿಗೆ:

1) ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2) ಸಂಬಂಧಪಟ್ಟ ಮಾನ್ಯ ವಿಧಾನಪರಿಷತ್ ಸದಸ್ಯರು (ಜಿಲ್ಲಾಧಿಕಾರಿಗಳ ಮೂಲಕ)
3) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ.
4) ಸರ್ಕಾರದ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿ, ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ.
5) ಜಿಲ್ಲಾಧಿಕಾರಿಗಳು, ರಾಮನಗರ ಜಿಲ್ಲೆ.
6) ನಿರ್ದೇಶಕರು/ಜಂಟಿ ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ಬೆಂಗಳೂರು.
7) ಜಿಲ್ಲಾ ಖಜಾನಾಧಿಕಾರಿಗಳು, ರಾಮನಗರ ಜಿಲ್ಲೆ.
8) ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-6) ವಿಧಾನಸೌಧ.
9) ಸರ್ಕಾರದ ವಾರದ ರಾಜ್ಯ ಪತ್ರ/ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.